ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 15/11/2019

# ರಫೇಲ್ ಬಗ್ಗೆ ಸುಪ್ರೀಂ ತೀರ್ಪು

# ಗೆದ್ದ ಮೋದಿ, ಬಿದ್ದ ರಾಹುಲ್

ಕ.ಪ್ರ 15/11/19

## ವಿಮಾನ ಖರೀದಿ ಕುರಿತ ಮೇಲ್ಮನವಿ ಅರ್ಜಿ ತಿರಸ್ಕೃತ

### ರಾಹುಲ್ ಕ್ಷಮೆಗೆ ಬಿಜೆಪಿ ಆಗ್ರಹ
### ಜೆಪಿಸಿ ತನಿಖೆಗೆ ರಾಹುಲ್ ಬೇಡಿಕೆ

ನವದೆಹಲಿ: ರಫೇಲ್ ಯುದ್ಧ ವಿಮಾನ ಖರೀದಿ ಪ್ರಕರಣದಲ್ಲಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರಕ್ಕೆ ಸುಪ್ರೀಂ ಕೋರ್ಟ್‌ಮತ್ತೊಮ್ಮೆ ಕ್ಲೀನ್‌ಚಿಟ್ ನೀಡಿದೆ.



ರಫೇಲ್ ಯುದ್ಧ ವಿಮಾನಗಳ ಖರೀದಿ ಸಂಬಂಧ ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆ (ದರ ನಿಗದಿ, ಖರೀದಿ ನಿರ್ಧಾರ ಮತ್ತು ಭಾರತೀಯ ಪಾಲುದಾರನ ಆಯ್ಕೆ) ಮೇಲೆ ಅನುಮಾನಪಡುವ ಸಂದರ್ಭವೇ ಉದ್ಭವಿಸದು ಎಂದು 2018ರ ಡಿ.14ರಂದು ಸುಪ್ರೀಂ ಕೋರ್ಟ್ ನೀಡಿದ ತೀರ್ಪು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಗಳನ್ನು ಸರ್ವೋಚ್ಚ ನ್ಯಾಯಾಲಯ ಗುರುವಾರ ತಿರಸ್ಕರಿಸಿದೆ. » 13

## ಚೌಕೀದಾರ್ ಕಳ್ಳ ಎಂದ ರಾಹುಲ್‌ಗೆ ಸುಪ್ರೀಂ ತಪರಾಕಿ!

### ಸತ್ಯಾಸತ್ಯತೆ ತಿಳಿದು ಮಾತನಾಡಿ
### ನ್ಯಾಯಾಲಯ ಖಡಕ್ ಎಚ್ಚರಿಕೆ

ನವದೆಹಲಿ: 'ಚೌಕೀದಾರ್ ಚೋರ್ ಹೈ ಎಂದು ಸುಪ್ರೀಂ ಕೋರ್ಟ್ ಹೇಳಿದೆ' ಎಂಬ ಕಾಂಗ್ರೆಸ್ ಹಿಂದಿನ ಅಧ್ಯಕ್ಷ ರಾಹುಲ್ ಗಾಂಧಿ ಅವರ



ಹೇಳಿಕೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರುವ ಸುಪ್ರೀಂ ಕೋರ್ಟ್, 'ಈ ರೀತಿ ನಾವು ಹೇಳಿದ್ದೆವು ಎಂಬುದು ಸತ್ಯಕ್ಕೆ ದೂರವಾದದ್ದು. ಇಂತಹ ಹೇಳಿಕೆಯನ್ನು ರಾಹುಲ್ ನೀಡಬಾರದಿತ್ತು. ಭವಿಷ್ಯದಲ್ಲಿ ಅವರು ಜಾಗರೂಕರಾಗಿರಬೇಕು' ಎಂದು ಚಾಟಿ ಬೀಸಿದೆ. ಆದರೆ ರಾಹುಲ್ ಹೇಳಿಕೆಯನ್ನು ಖಂಡಿಸಿ ಅವರ ವಿರುದ್ಧ ಬಿಜೆಪಿ ಸಂಸದೆ ಮೀನಾಕ್ಷಿ ಲೇಖಿ ಹೂಡಿದ್ದ ನ್ಯಾಯಾಂಗ ನಿಂದನೆ ದಾವೆಯನ್ನು ಇತ್ಯರ್ಥಪಡಿಸಿದೆ. » 13

9

# ರಫೇಲ್ ಖರೀದಿ ಕುರಿತ ಮೇಲ್ಮನವಿ ಅರ್ಜಿ ತಿರಸ್ಕೃತ

18/11/19

⬅ ಮೊದಲ ಪುಟದಿಂದ

ಮಟ್ಟದ ವರೆಗೆ ವಿಮಾನ ಖರೀದಿಸಲು ಒಪ್ಪಂದ ಮಾಡಿಕೊಳ್ಳಲಾಗಿದ್ದು, ಈ ಎಫ್‌ಐಆರ್ ದಾಖಲಿಸಿ ಸಿಬಿಐ ತನಿಖೆಗೆ ನಿರ್ದೇಶನ ನೀಡಬೇಕೆಂಬ ಅರ್ಜಿದಾರರ ಕೋರಿಕೆಯನ್ನೂ ತಳ್ಳಿಹಾಕಿದೆ. ಹೀಗಾಗಿ 11 ತಿಂಗಳ ಅವಧಿಯಲ್ಲಿ ಕೇಂದ್ರ ಸರ್ಕಾರಕ್ಕೆ ರಫೇಲ್ ವಿಚಾರವಾಗಿ 2ನೇ ಬಾರಿಗೆ ಕ್ಲೀನ್‌ಚಿಟ್ ಸಿಕ್ಕಂತಾಗಿದೆ.


ಯುದ್ಧ ವಿಮಾನಗಳ ಲಭ್ಯತೆ ಬಗ್ಗೆ ಯಾವುದೇ ವಿವಾದವಿಲ್ಲ. ವಿಮಾನಗಳ ಖರೀದಿ ಪ್ರಸ್ತಾವ ಹಲವು ಸರ್ಕಾರಗಳ ಬಳಿ ಇತ್ತು. ಕೆಲವು ವ್ಯಕ್ತಿಗಳಿಗೆ ಸಂದೇಹ ಬಂದಿದೆ ಎಂಬ ಕಾರಣಕ್ಕೆ ವಿಮಾನಗಳ ಬೆಲೆ ನಿರ್ಧರಿಸುವುದು ನ್ಯಾಯಾಲಯದ ಕೆಲಸವಲ್ಲ. ಸೇಬಿನ ಜತೆ ಕಿತ್ತಳೆ ಹಣ್ಣನ್ನು ಹೋಲಿಕೆ ಮಾಡಲು ಆಗುವುದಿಲ್ಲ ಎಂದು ಮುಖ್ಯ ನ್ಯಾಯಮೂರ್ತಿ ರಂಜನ್ ಗೊಗೊಯ್ ಹಾಗೂ ನ್ಯಾಯಮೂರ್ತಿಗಳಾದ ಎಸ್. ಕೆ. ಕೌಲ್ ಹಾಗೂ ಕೆ.ಎಂ. ಜೋಸೆಫ್ ಅವರಿದ್ದ ಪೀಠ ಹೇಳಿದೆ. ಕೆ.ಎಂ. ಜೋಸೆಫ್ ಅವರು ಪ್ರತ್ಯೇಕ ತೀರ್ಪು ಬರೆದಿದ್ದು, ತನಿಖಾ ಸಂಸ್ಥೆಗಳು ಸ್ವಯಂ ತನಿಖೆ ನಡೆಸಬಹುದು ಎಂದು ಹೇಳಿದ್ದಾರೆ. ಆದರೆ ಮೂಲ ತೀರ್ಪಿಗೆ ಅವರು ಸಹಮತ ವ್ಯಕ್ತಪಡಿಸಿದ್ದಾರೆ.

ಇದರಿಂದಾಗಿ, ಫ್ರಾನ್ಸ್‌ನ ಡಸಾಲ್ಟ್ ಏವಿಯೇಷನ್ ಕಂಪನಿಯಿಂದ 36 ರಫೇಲ್ ಯುದ್ಧ ವಿಮಾನಗಳನ್ನು ಖರೀದಿಸುವ ಪ್ರಕ್ರಿಯೆಯಲ್ಲಿ ಭಾರಿ ಗೋಲ್‌ಮಾಲ್ ನಡೆದಿದೆ ಎಂದು ಹಲವು ಬಾರಿ ಗಂಭೀರ ಆಪಾದನೆ ಮಾಡಿದ್ದ ಕಾಂಗ್ರೆಸ್ಸಿನ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರಿಗೆ ತೀವ್ರ ಮುಖಭಂಗವಾಗಿದೆ. ಈ ಪ್ರಕರಣದಲ್ಲಿ ಕಾನೂನು ಹೋರಾಟ ನಡೆಸಿದ್ದ ಕೇಂದ್ರದ ಮಾಜಿ ಸಚಿವರಾದ ಯಶವಂತ ಸಿನ್ಹಾ, ಅರುಣ್ ಶೌರಿ, ವಕೀಲರ ಪ್ರಶಾಂತ್ ಭೂಷಣ್, ಆಮ್ ಆದ್ಮಿ ಪಕ್ಷಕ್ಕೂ ಭಾರಿ ಹಿನ್ನಡೆಯಾಗಿದೆ.

ತೀರ್ಪಿನ ಬೆನ್ನಲ್ಲೇ ಕಾಂಗ್ರೆಸ್ ಹಾಗೂ ಅದರ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ಕಿಡಿಕಾರಿದೆ. ಸುಪ್ರೀಂಕೋರ್ಟ್‌ನ ತೀರ್ಪು ಪ್ರಾಮಾಣಿಕವಾಗಿ ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆ ನಡೆಸುತ್ತಿರುವ ಮೋದಿ ಸರ್ಕಾರಕ್ಕೆ ಸಿಕ್ಕ ಮನ್ನಣೆ. ಹೀಗಾಗಿ ಕಾಂಗ್ರೆಸ್ ಪಕ್ಷ ಹಾಗೂ ರಾಹುಲ್ ಗಾಂಧಿ ಅವರು ದೇಶದ ಕ್ಷಮೆ ಯಾಚಿಸಬೇಕು ಎಂದು ಕೇಂದ್ರ ಸಚಿವ ರವಿಶಂಕರ ಪ್ರಸಾದ್ ಆಗ್ರಹಿಸಿದ್ದಾರೆ. ಪ್ರಧಾನಿ ಮೋದಿ ಹಾಗೂ ಅವರ ಸರ್ಕಾರದ ಪ್ರಾಮಾಣಿಕ ವರ್ಚಸ್ಸಿಗೆ ಮಸಿ ಬಳಿಯುವ ಪ್ರಯತ್ನ ಇದಾಗಿತ್ತು. ಇಂತಹ ಅಪಪ್ರಚಾರ ನಡೆಸಿದ ಕಾಂಗ್ರೆಸ್ಸನ್ನು ಜನ ಕ್ಷಮಿಸುವುದಿಲ್ಲ. ದೇಶವನ್ನು ಹಾದಿ ತಪ್ಪಿಸಿದ್ದಕ್ಕಾಗಿ ಆ ಪಕ್ಷ ಕ್ಷಮೆ ಯಾಚಿಸಬೇಕು ಎಂದು ರಕ್ಷಣಾ ಸಚಿವ ರಾಜನಾಥ ಸಿಂಗ್ ತಾಕೀತು ಮಾಡಿದ್ದಾರೆ.

**ಮತ್ತೊಮ್ಮೆ ಕ್ಲೀನ್‌ಚಿಟ್:** ರಫೇಲ್ ಯುದ್ಧ ವಿಮಾನ ಖರೀದಿ ಒಪ್ಪಂದ ಕುರಿತು ನ್ಯಾಯಾಲಯದ ಉಸ್ತುವಾರಿಯಲ್ಲಿ ತನಿಖೆ ನಡೆಸಬೇಕು ಎಂದು ಕೋರಿ ಯಶವಂತ ಸಿನ್ಹಾ, ಅರುಣ್ ಶೌರಿ ಮತ್ತಿತರರು ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು. ಅದು 2018ರ ಡಿ.14ರಂದು ವಜಾಗೊಂಡಿತ್ತು. ಈ ತೀರ್ಪಿನ ವಿರುದ್ಧ ಈ ಎಲ್ಲರೂ ಮೇಲ್ಮನವಿ ಸಲ್ಲಿಸಿದ್ದರು. ಈ ಅರ್ಜಿಯನ್ನು ಸರ್ವೋಚ್ಚ ನ್ಯಾಯಾಲಯ ವಜಾಗೊಳಿಸಿದೆ. ಖರೀದಿ ಒಪ್ಪಂದ ಕುರಿತು ಪ್ರಕರಣ ದಾಖಲಿಸಿ, ಸಿಬಿಐ ವಿಚಾರಣೆಗೆ ಆದೇಶಿಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ. ಆದರೆ ಈ ಹಿಂದೆಯೇ ಇದನ್ನು ಪರಿಶೀಲಿಸಲಾಗಿದೆ ಎಂದು ಕೋರ್ಟ್ ಹೇಳಿದೆ.

58 ಸಾವಿರ ಕೋಟಿ ರು. ಮೊತ್ತದ ರಫೇಲ್ ಯುದ್ಧ ವಿಮಾನ ಖರೀದಿ ಒಪ್ಪಂದಕ್ಕೆ ಸಂಬಂಧಿಸಿದ ಪ್ರಶ್ನೆಗಳನ್ನು ಯಾವುದೇ ತನಿಖೆ ಕೂಡ ಮಾಡದೇ ಅಪಕ್ವವಾಗಿ ಸುಪ್ರೀಂಕೋರ್ಟ್ ವಿಲೇವಾರಿ ಮಾಡಿದೆ ಎಂದು ಅರ್ಜಿದಾರರು ಮಂಡಿಸಿರುವ ವಾದ ತೃಪ್ತಿದಾಯಕವಾಗಿಲ್ಲ ಎಂದು ಅಭಿಪ್ರಾಯಪಟ್ಟಿದ್ದು, ಅರ್ಜಿಗಳನ್ನು ವಜಾಗೊಳಿಸಿದೆ.



## ಜೆಪಿಸಿ ತನಿಖೆ ಇಲ್ಲ: ಜೋಶಿ



**ರಫೇಲ್ ವಿಚಾರವನ್ನು ಸುಪ್ರೀಂ ಕೋರ್ಟ್ ಅನೇಕ ಬಾರಿ ವಿಚಾರಣೆ ನಡೆಸಿ ಕಾಂಗ್ರೆಸ್ ಪಕ್ಷದ ವಾದವನ್ನು ತಿರಸ್ಕರಿಸಿದೆ. ಮರುಪರಿಶೀಲನಾ ಅರ್ಜಿ ಅಗತ್ಯವೇ ಇರಲಿಲ್ಲ. ಇನ್ನು ಜಂಟಿ ಸದನ ಸಮಿತಿ ರಚಿಸಿ ಇದರ ತನಿಖೆ ಮಾಡಿಸಲ್ಲ.**

**• ಪ್ರಹ್ಲಾದ ಜೋಶಿ**
ಕೇಂದ್ರ ಸಂಸದೀಯ ಸಚಿವ

## ಸಿಬಿಐ ತನಿಖೆಗೆ ಅಡ್ಡಿ ಇಲ್ಲ: ನ್ಯಾ.ಜೋಸೆಫ್

ನವದೆಹಲಿ: ರಫೇಲ್ ಪ್ರಕರಣದಲ್ಲಿ ಕೇಂದ್ರ ಸರ್ಕಾರಕ್ಕೆ ಕ್ಲೀನ್‌ಚಿಟ್ ನೀಡಿದ್ದರೂ, ಸರ್ಕಾರದ ಮೇಲೆ ಕೇಳಿಬಂದ ಆರೋಪಗಳ ಬಗ್ಗೆ ತನಿಖೆ ನಡೆಸಲು ಸಿಬಿಐ ಸ್ವತಂತ್ರವಾಗಿದೆ ಎಂದು ನ್ಯಾ. ಕೆ.ಎಂ.ಜೋಸೆಫ್ ತಾವು ಬರೆದ ಪ್ರತ್ಯೇಕ ತೀರ್ಪಿನಲ್ಲಿ ಸ್ಪಷ್ಟಪಡಿಸಿದ್ದಾರೆ. ರಫೇಲ್ ಖರೀದಿಯಲ್ಲಿ ಕೇಂದ್ರ ಸರ್ಕಾರಕ್ಕೆ ಕ್ಲೀನ್‌ಚಿಟ್ ನೀಡಿದ್ದ 2018 ಡಿ.14ರ ತೀರ್ಪು ಯಾವುದೇ ರೀತಿಯಲ್ಲೂ ತನಿಖೆಗೆ ಅಡ್ಡಿ ಮಾಡದು. ತನಿಖಾ ಸಂಸ್ಥೆಗಳು ಭ್ರಷ್ಟಾಚಾರ ತಡೆ ಕಾಯ್ದೆಯ 17–ಎ ನಿಯಮದಡಿ ಪೂರ್ವಾನುಮತಿ ಪಡೆದ ಕೇಸು ದಾಖಲಿಸಬಹುದು ಎಂದು ಹೇಳಿದ್ದಾರೆ.

## ಜೆಪಿಸಿ ತನಿಖೆಗೆ ರಾಹುಲ್ ಆಗ್ರಹ

ನವದೆಹಲಿ: ರಫೇಲ್ ಯುದ್ಧ ವಿಮಾನ ಖರೀದಿ ಒಪ್ಪಂದದಲ್ಲಿ ಸುಪ್ರೀಂಕೋರ್ಟ್ ಕೇಂದ್ರ ಸರ್ಕಾರಕ್ಕೆ ಕ್ಲೀನ್‌ಚಿಟ್ ನೀಡಿದ್ದರೂ, ಖರೀದಿ ಕುರಿತು ಜೆಪಿಸಿ ತನಿಖೆಗೆ ಕಾಂಗ್ರೆಸ್‌ನ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಆಗ್ರಹಿಸಿದ್ದಾರೆ. ಈ ಆಗ್ರಹಕ್ಕೆ ಅವರು ಅಸ್ತ್ರವಾಗಿ ಬಳಸುತ್ತಿರುವುದು, ರಫೇಲ್ ತೀರ್ಪು ನೀಡಿದ ತ್ರಿಸದಸ್ಯ ಪೀಠದಲ್ಲಿದ್ದ ನ್ಯಾ। ಕೆ.ಎಂ. ಜೋಸೆಫ್ ಅವರು ಅಭಿಪ್ರಾಯ ವ್ಯಕ್ತಪಡಿಸಿ, 'ತನಿಖಾ ಸಂಸ್ಥೆಗಳು ಈ ವಿಚಾರವಾಗಿ ಸ್ವಯಂ ತನಿಖೆ ನಡೆಸಬಹುದು' ಎಂದು ಹೇಳಿದ್ದಾರೆ. ಈ ಹಿನ್ನೆಲೆಯಲ್ಲಿ ರಾಹುಲ್ ಗಾಂಧಿ ಜೆಪಿಸಿ ತನಿಖೆಗೆ ಆಗ್ರಹಿಸಿ ಟ್ವೀಟ್ ಮಾಡಿದ್ದಾರೆ.